ಮೇಲೆ ನಮೂದಿಸಲಾದಂತೆ ಚಿಕ್ಕಪುಟ್ಟ ಗುನ್ನೆ ನಡೆದಿದ್ದು ಈ ಕುರಿತು ಪ್ರಕರಣ ದಾಖಲಿಸಲಾಗಿದ್ದು ಕಾನೂನಿನಂತೆ ಕ್ರಮ ಜರುಗಿಸಲಾಗಿದೆ

ಇ) ಯಾವುದೇ ಅರಣ್ಯ ಅಕ್ರಮ ಪ್ರಕರಣಗಳು ಕಂಡು ಬಂದಲ್ಲಿ ಅವುಗಳನ್ನು ನಿಯಂತ್ರಿಸುವ ಕುರಿತು ಅರಣ್ಯ ಸಿಬ್ಬಂದಿಗಳು ಗಸ್ತು ತಿರುಗುವುದು, ರಾತ್ರಿ ಪಹರೆ, ರಕ್ಷಣಾ ಶಿಬಿರಗಳ ನಿರ್ಮಾಣ ಮುಂತಾದ ಅರಣ್ಯ ರಕ್ಷಣಾ ಕ್ರಮಗಳ ಮೂಲಕ ಇಂತಹ ಪ್ರಕರಣ ಪತ್ತೆ ಹಚ್ಚಿ ಕಾನೂನು ಕ್ರಮ ಜರುಗಿಸಲಾಗುತ್ತಿದೆ

1355 (2047) ಶ್ರೀ ಮೋಹನ್ ಕೃಷ್ಣ ಶೆಟ್ಟಿ (ಕುಮಟಾ) – ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕನ್ನಡ ಜಿಲ್ಲೆಯಲ್ಲಿ ವ್ಯಾಪಕ ಅರಣ್ಯ ಲೂಟಿಯನ್ನು ತಡೆಗಟ್ಟಲು ಸರ್ಕಾರ ಏನು ಕ್ರಮ ಕೈಗೊಂಡಿದೆ,

ಆ) ಉಪ ವಿಭಾಗೀಯ ಮಟ್ಟದಲ್ಲಿ ಕ್ಷಿಪ್ರ ಕಾರ್ಯಾಚರಣೆ ಪಡೆ ರಚನೆ ಮಾಡುವ ಬಗ್ಗೆ ಸರ್ಕಾರ ಯೋಚಿಸಿದೆಯೇ,

ಇ) ಯೋಚಿಸಿದ್ದರೆ, ಯಾವ ಕ್ರಮ ಕೈಗೊಳ್ಳಲಾಗುವುದು, ಯಾವಾಗ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಸಿ ಚನ್ನಿಗಪ್ಪ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು)

ಅ) ಉತ್ತರ ಕನ್ನಡ ಜಿಲ್ಲೆಯು ಅರಣ್ಯ ಸಂಪದ್ಭರಿತ ಜಿಲ್ಲೆಯಾಗಿರುವುದರಿಂದ ಅರಣ್ಯ ಸಂಪತ್ತು ಲೂಟಿಯಾಗದಂತೆ ಇಲಾಖೆಯು ಎಲ್ಲಾ ತರಹದ ಮುಂಜಾಗ್ರತಾ ಕ್ರಮವನ್ನು ತೆಗೆದುಕೊಂಡಿದೆ ಮುಖ್ಯವಾಗಿ ಜಿಲ್ಲೆಯ ಉಪ ಅರಣ್ಯ ಸಂರಕ್ಷಣಾಧಿಕಾರಿಗಳನ್ನು ಒಳಗೊಂಡ ಅರಣ್ಯ ಸಂಚಾರಿ ದಳವನ್ನು ಸ್ಥಾಪಿಸಲಾಗಿದೆ, ಅಷ್ಟೇ ಅಲ್ಲದೇ ಪ್ರತಿ ವಿಭಾಗದಲ್ಲಿ ಅರಣ್ಯ ಜಾಗೃತ ದಳವನ್ನು ನಿರ್ಮಿಸಿ, ಪಾಳಿಯ ಪ್ರಕಾರ ರಾತ್ರಿಯಲ್ಲಿ ಗಸ್ತು ಮಾಡಲಾಗುತ್ತಿದೆ ಅರಣ್ಯ ಸಿಬ್ಬಂದಿಗಳಿಗೆ ಅರಣ್ಯ ಸಂಪತ್ತು ಕಳ್ಳ ಸಾಗಾಣಿಕೆ ಕುರಿತು ಕೂಡಲೇ ಕೇಂದ್ರ ಸ್ಥಾನಕ್ಕೆ ಮಾಹಿತಿ ಪೂರೈಸಲು

ನಿಸ್ತಂತು ಉಪಕರಣಗಳನ್ನು ನೀಡಲಾಗಿದೆ ದಟ್ಟವಾದ ಅರಣ್ಯ ಇರುವ ಪ್ರದೇಶಕ್ಕೆ ಹೋಗುವ ರಸ್ತೆಗಳಲ್ಲಿ ತನಿಖಾ ಠಾಣೆಗಳನ್ನು ನಿರ್ಮಿಸಲಾಗಿದೆ ಮತ್ತು ರಾತ್ರಿಯಲ್ಲಿ ಓಡಾಡುವ ವಾಹನ ತಪಾಸಣೆ ಮಾಡಲಾಗುತ್ತಿದೆ

ಆ) ಇಂತಹ ಪ್ರಸ್ತಾವ ಇರುವುದಿಲ್ಲ

ಇ) ಉದ್ಭವಿಸುವುದಿಲ್ಲ

1356 (1883) ಶ್ರೀ ಮುನಿಯಪ್ಪ ಎಸ್ ಎಂ (ಚಿಕ್ಕಬಳ್ಳಾಪುರ) – ಮಾನ್ಯ ಉಪ ಮುಖ್ಯಮಂತ್ರಿಗಳು ಮತ್ತು ಹಣಕಾಸು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರೈತರು ಬ್ಯಾಂಕಿನಲ್ಲಿ ಸಾಲ ಪಡೆಯಲು ಬೇರೆ ಬ್ಯಾಂಕುಗಳಿಂದ ಬೇ ಬಾಕಿ ಪ್ರಮಾಣ ಪತ್ರ (ಎನ್ ಒ ಸಿ) ಪಡೆಯಲು ಕಷ್ಟ ಪಡುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಬೇ ಬಾಕಿ ಪತ್ರ ಪಡೆಯುವ ಪದ್ಧತಿ ಇಡೀ ರಾಜ್ಯಕ್ಕೆ ಅನ್ವಯಿಸುತ್ತದೆಯೇ, ಅಥವಾ ಸೀಮಿತ ತಾಲ್ಲೂಕುಗಳಿಗೆ ಅನ್ವಯವಾಗುತ್ತದೆಯೇ,

ಇ) ಬ್ಯಾಂಕುಗಳಲ್ಲಿ ಬೇ ಬಾಕಿ ಪ್ರಮಾಣ ಪತ್ರ ನೀಡಲು ಹಣ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಈ) ಹಾಗಿದ್ದಲ್ಲಿ, ರೈತರಿಗೆ ಹಾಗೂ ಸಾರ್ವಜನಿಕರಿಗೆ ಉಚಿತವಾಗಿ ಬ್ಯಾಂಕುಗಳಲ್ಲಿ ಬೇ ಬಾಕಿ ಪ್ರಮಾಣ ಪತ್ರ ನೀಡುವಂತೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತದೆ?

ಶ್ರೀ ಬಿ ಎಸ್ ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಮತ್ತು ಹಣಕಾಸು ಸಚಿವರು)

ಅ) ಬಂದಿಲ್ಲ

ಆ) ಇಡೀ ರಾಜ್ಯಕ್ಕೆ ಅನ್ವಯವಾಗುತ್ತದೆ